ನಿರ್ಮಾಣಕ್ಕೆ ಅವಕಾಶ ಮಾಡಿಕೊಳ್ಳಲಾಗಿದೆ. ಕೋಲಾರ ಜಿಲ್ಲೆಯಲ್ಲಿ ಶಿಕ್ಷಕರ ಕೊರತೆ ಕಂಡು ಬಂದಿಲ್ಲ.

ಇ) ಇಲ್ಲ.

ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಆಸ್ಪತ್ರೆಗಳು

1040 - ಶ್ರೀ ಶಿವಶಂಕರ ರೆಡ್ಡಿ (ಗೌರಿಬಿದನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು? ರೋಗಿಗಳಿಗೆ ಮೂಲಭೂತ ಸೌಲಭ್ಯಗಳು ಮತ್ತು ಆಸ್ಪತ್ರೆಗಳಿಗೆ ಔಷಧಿ ಮತ್ತಿತರ ವಸ್ತುಗಳು ಸರ್ಕಾರಕ್ಕೆ ಪೂರೈಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ತಾಲ್ಲೂಕಿನಲ್ಲಿ ಹಾವುಗಳು ಕಚ್ಚಿ ಸತ್ತಿರುವವರ ಸಂಖ್ಯೆ ಎಷ್ಟು? ಸಕಾಲದಲ್ಲಿ ಚಿಕಿತ್ಸೆ ದೊರೆಯದೆ ಸತ್ತಿರುವುದು ನಿಜವಲ್ಲವೆ.

ಇ) ಕಳೆದ 10 ವರ್ಷಗಳಿಂದ ಗೌರಿಬಿದನೂರಿನ ಸಾರ್ವಜನಿಕ ಆಸ್ಪತ್ರೆಗೆ ಕೊಡುತ್ತಿರುವ ಅನುದಾನವನ್ನು ಹೆಚ್ಚಿಸದಿರುವುದು ನಿಜವಲ್ಲವೆ.

1992-99ರವರೆಗಿನ ಈ ಆಸ್ಪತ್ರೆಯಲ್ಲಿ ಒಳ ಹಾಗೂ ಹೊರ ರೋಗಿಗಳು ಗಣನೀಯ ಪ್ರಮಾಣದಲ್ಲಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಈ) ಗೌರಿಬಿದನೂರು ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು? ಇವುಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಡಾ॥ ಎ.ಬಿ. ಮಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ 19 ಸರ್ಕಾರಿ ಆಸ್ಪತ್ರೆಗಳಿವೆ. ಬಂದಿರುವುದಿಲ್ಲ.

ಆ) ಲಭ್ಯವಿರುವ ಮಾಹಿತಿಯನ್ವಯ 1996ರಿಂದ 1999ರವರೆಗೆ 15 ಮಂದಿ ಹಾವು ಕಡಿತದ ಚಿಕಿತ್ಸೆಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದು ಯಾರೂ ಮರಣಿಸಿರುವುದಿಲ್ಲ.

ಇ) ನಿಜವಲ್ಲ. ಹೆಚ್ಚಾಗುತ್ತಿರುವುದು ನೀಜ. ಅವಶ್ಯಕತೆಗೆ ತಕ್ಕಂತೆ ಔಷಧಿ ಮತ್ತಿತರ ವಸ್ತುಗಳನ್ನು ಒದಗಿಸಲಾಗುತ್ತಿದೆ.

ಈ) ಗೌರಿಬಿದನೂರು ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳಿಗೆ ಸಂಬಂಧಿಸಿದಂತೆ ಒಟ್ಟು 3 ಹುದ್ದೆಗಳು ಖಾಲಿ ಇರುತ್ತವೆ. ಮತ್ತು ಸಿಬ್ಬಂದಿ ವರ್ಗಕ್ಕೆ ಸೇರಿದವರು ಒಟ್ಟು 106 ಹುದ್ದೆಗಳು ಖಾಲಿ ಇರುತ್ತವೆ.

ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ ಬರುವ ವೈದ್ಯರುಗಳನ್ನು ನೇಮಕ ಮಾಡುವ ಮೂಲಕ ತುಂಬಲಾಗುವುದು. ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಕೆ.ಎಚ್.ಎಸ್.ಡಿ.ಪಿ ಅಡಿಯಲ್ಲಿ 573 ವೈದ್ಯರುಗಳನ್ನು ನೇಮಕ ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಇದಾದ ನಂತರ ತಪ್ಪದೆ ತುಂಬಲಾಗುವುದು. ಪ್ರಯೋಗ ಶಾಲಾ ತಂತ್ರಜ್ಞರು, ಕ್ಷ-ಕಿರಣ ತಂತ್ರಜ್ಞರು ನೇತ್ರ ಸಹಾಯಕರು ಮತ್ತು ವಾಹನ ಚಾಲಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮೂಲಕ ತುಂಬಲು ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ.

ಪ್ರಾಥಮಿಕ ಶಾಲಾ ಶಿಕ್ಷಕರ ಹೆಚ್ಚುವರಿ ನೇಮಕಾತಿ

1041 - ಶ್ರೀ ಶಿವಶಂಕರ ರೆಡ್ಡಿ .ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) *1998-99ನೇ ಸಾಲಿನ ಪ್ರಾಥಮಿಕ ಶಾಲಾ ಶಿಕ್ಷಕರ ಹೆಚ್ಚುವರಿ ಶೇಖಡ 25 ಪಟ್ಟಿ ಪ್ರಕಟಿಸಿ 4 ತಿಂಗಳಾದರೂ ಆದೇಶ ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ*

ಆ) *ಹೆಚ್ಚುವರಿ ಪಟ್ಟಿಯನ್ನು ಕಳೆದ 5 ವರ್ಷಗಳಿಂದ ಪ್ರಕಟಿಸಿ ಆದೇಶ ಪಟ್ಟಿಯನ್ನು ನೀಡುತ್ತಿರುವುದು ಸರ್ಕಾರಕ್ಕೆ ತಿಳಿದಿಲ್ಲವೇ. ಡಿ.ಪಿ.ಎ.ಆರ್. ಇಲಾಖೆಯವರು ಆದೇಶ ಪತ್ರ ನೀಡಲು ಅನುಮತಿ ನೀಡಿದ್ದಾರೆಯೇ ಇಲ್ಲವೇ?*

ಇ) *ಹೆಚ್ಚುವರಿ ಪಟ್ಟಿಯನ್ನು ಪ್ರಕಟಿಸಲು ಗ್ರಾಮೀಣ ಕೃಪಾಂಕದ ವಿವಾದ ಕಾರಣವಾಗಿದೆಯೇ?*

ಈ) *ಇನ್ನು ಮುಂದೆ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಅಭ್ಯರ್ಥಿಯ ಶೈಕ್ಷಣಿಕ ಅರ್ಹತೆಯ ಜೊತೆಗೆ ವಯಸ್ಸನ್ನು ಮಾನದಂಡವನ್ನಾಗಿಸಲು ಸರ್ಕಾರದ ಮುಂದೆ ಯೋಚನೆ ಇದೆಯೇ?*

ಶ್ರೀ ಹಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ. ಜಾರಿಯಲ್ಲಿರುವ ನಿಯಮಗಳ ಅವಕಾಶದನ್ವಯ ಹೆಚ್ಚುವರಿ ಪಟ್ಟಿ ಜಾರಿ ಮಾಡಲು ಎಲ್ಲಾ ಉಪನಿರ್ದೇಶಕರಿಗೆ ಸೂಚಿಸಲಾಗಿದೆ.

ಆ) ತಿಳಿದಿದೆ. ಹಾಲಿ ಜಾರಿಯಲ್ಲಿರುವ ನೇಮಕಾತಿ ನಿಯಮಗಳನ್ವಯ ಹೆಚ್ಚುವರಿ ಪಟ್ಟಿ ಜಾರಿ ಮಾಡಲು ಸಿ.ಎ.ಸು. ಇಲಾಖೆಯು ಅಭಿಪ್ರಾಯ ನೀಡಿರುತ್ತದೆ.

ಇ) ಇಲ್ಲ.

ಈ) ಇರುವುದಿಲ್ಲ.